**ಪಿ.ಡಬ್ಲ್ಯೂಃ 1**

**ಸಾಕ್ಷಿಗೆ ಕನ್ನಡ ಭಾಷೆ ಬಾರದ ಕಾರಣ ಶ್ರೀ.ಎನ್.ಎ.ಎಸ್ ವಕೀಲರನ್ನು ಭಾಷಾನುವಾದಕಾರರನ್ನಾಗಿ ನೇಮಿಸಲಾಯಿತು.**

ದಿನಾಂಕಃ19.04.2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ವಾದಿಯ ಪರ ಶ್ರೀ ಎಂ ಡಿ ಜೆಃ ವಕೀಲರಿಂದ**

ಇಂದು ನಾನು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣೀಕರಿಸುತ್ತೇನೆ.

2. 23 ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ.1 ರಿಂದ 23 ಎಂದು, ದಿಃ11.01.1993 ರಂದು ಬರೆಯಲಾದ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.24 ಎಂದು, ದಿಃ 25.06.2021 ರಂದು ಬರೆಯಲಾದ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.25 ಎಂದು, 1 ಮ್ಯುಟೇಶನ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.26 ಎಂದು, ಕೈ ಬರವಣಿಗೆಯಲ್ಲಿರುವ 4 ಪಹಣಿ ಪತ್ರಿಕೆಗಳ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ.27 ರಿಂದ 30 ಎಂದು, ಎಂ ಆರ್ ನಂಃ ಹೆಚ್ 28 ರ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.31 ಎಂದು, ಮ್ಯುಟೇಶನ್ ನಂಃ119/92-93 ರ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.32 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಸಮಯಾವಕಾಶ ಕೋರಿದ್ದರಿಂದ ವಿನಂತಿಯ ಮೇರೆಗೆ ಸಮಯಾವಕಾಶ ನೀಡಲಾಯಿತು.**

ನನ್ನ ಹೇಳಿಕೆಯ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.

ಓ.ಹೇ.ಕೆ. ಸರಿ ಇದೆ.

**ಸಿವಿಲ್ ಮತ್ತು ಜೆ.ಎಮ್.ಎಫ್.ಸಿ.**
**ನ್ಯಾಯಾಧೀಶರು, ಸಿರುಗುಪ್ಪ**